<u>ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ</u>

**<u>ಸಿ.ಸಿ. ಸಂಖ್ಯೆ 781/2025</u>**

<u>ಫಿರ್ಯಾದಿ</u> : ಶ್ರೀ ಬಿ.ಎಸ್.ಪ್ರದೀಪ್,
ವಯಸ್ಸು ಸುಮಾರು 50 ವರ್ಷ,
ಬಿನ್ ಬಿ.ಎಸ್.ಸಣ್ಣಪ್ಪಗೌಡ,
ವಾಸಃ ಬಿದರಹಳ್ಳಿ ಗ್ರಾಮ ಮತ್ತು ಅಂಚೆ,
ಮೂಡಿಗೆರೆ ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ.

ವಿರುದ್ಧ

<u>ಆರೋಪಿ</u> : ಶ್ರೀ ಅಭಿಷೇಕ್.ಬಿ.ಜೆ,
ವಯಸ್ಸು ಸುಮಾರು **28** ವರ್ಷ,
ಬಿನ್ ಬಿ.ಆರ್.ಜಯಪಾಲ್,
ವಾಸಃ ಬಿದರಹಳ್ಳಿ ಗ್ರಾಮ ಮತ್ತು ಅಂಚೆ,
ಮೂಡಿಗೆರೆ ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ.

<u>ಆಪಾದನೆಯ ಸಾರಾಂಶ</u>

ಶ್ರೀ ವಿಶ್ವನಾಥ್ ಎ., ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ, ಆದ ನಾನು, ಆರೋಪಿಯಾದ ನಿಮ್ಮ ಮೇಲೆ ಮಾಡುವ ಆಪಾದನೆ ಏನೆಂದರೆಃ-

ಆರೋಪಿಯಾದ ನೀವು ಪಿರ್ಯಾದುದಾರರರ ಕಾಫೀ ತೋಟದಲ್ಲಿ ಕಾರ್ಮಿಕರಾಗಿ ಕೆಲಸ ಮಾಡಿಕೊಂಡಿದ್ದು, ಅವರಿಂದ ಸಂಬಳವನ್ನು ಹೊರತುಪಡಿಸಿ ನಿಮ್ಮ ಕುಟುಂಬದ ತುರ್ತು ಹಣದ ಅವಶ್ಯಕತೆಗಳಿಗೋಸ್ಕರ ಹೆಚ್ಚುವರಿಯಾಗಿ ಒಟ್ಟು 1,50,000/- ರೂಪಾಯಿಗಳನ್ನು ಸಾಲವಾಗಿ ಪಡೆದಿದ್ದು, ಸದರಿ ಹಣದ ಮರುಪಾವತಿಗಾಗಿ ನಿಮ್ಮ ಖಾತೆ ಹೊಂದಿರುವ ಇಂಡಸ್ ಇಂಡ್ ಬ್ಯಾಂಕ್, ಚಿಕ್ಕಮಗಳೂರು ಶಾಖೆಯ ಚೆಕ್ ಸಂಖ್ಯೆ 412003, ದಿನಾಂಕ 08.01.2025, ರೂ.1,50,000/- ಎಂದು ನಮೂದಿಸಿ ನೀಡಿದ್ದು, ಸದರಿ ಚೆಕ್ ಅನ್ನು ಫಿರ್ಯಾದಿಯು ಕರ್ನಾಟಕ ಬ್ಯಾಂಕ್ ಲಿಮಿಟೆಡ್, ಮೂಡಿಗೆರೆ ಶಾಖೆಯಲ್ಲಿ ಜಮೆಗಾಗಿ ಸಲ್ಲಿಸಿದಾಗ, Drawers Signature Differs ಎಂದು ಹಿಂಬರಹ ನೀಡಿರುತ್ತಾರೆ. ಕಾರಣ, ಫಿರ್ಯಾದಿಯು ದಿನಾಂಕ 12.01.2025 ರಂದು ನೋಟೀಸ್ ಮೂಲಕ ಆರೋಪಿಯಾದ ನಿಮಗೆ ಸದರಿ ವಿಚಾರವನ್ನು ತಿಳಿಸಿದರೂ ಸಹ ನೀವು ಹಣವನ್ನು ವಾಪಸ್ ಮಾಡಿರುವುದಿಲ್ಲ. ಈ ರೀತ್ಯಾ ನೀವು ನೆಗೋಷಿಬಲ್ ಇನ್ಸ್ಟ್ರುಮೆಂಟ್ ಆಕ್ಟ್ ಕಲಂ 138 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಮಾಡಿರುವಿರಿ ಎಂದು ಆಪಾದಿಸಲಾಗಿದೆ?

ಪ್ರಃ 1. ಈಗ ಮೇಲೆ ಓದಿ ಹೇಳಿದ ಆಪಾದನೆಯನ್ನು ಕೇಳಿದ್ದೀರಾ? ಅದು ನಿಮಗೆ ಅರ್ಥವಾಯಿತೇ?

ಆರೋಪಿಯ ಉತ್ತರಃ

ಪ್ರಃ 2. ನೀವು ಆಪಾದನೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೋ?

ಆರೋಪಿಯ ಉತ್ತರಃ

*(*ದಿನಾಂಕ 10.06.2025 ರಂದು ಆಪಾದನೆಯ ಸಾರಾಂಶವನ್ನು ಆರೋಪಿಗೆ ತಿಳಿಯುವ ಭಾಷೆಯಲ್ಲಿ ಓದಿ, ಅವರ ಹೇಳಿಕೆಯನ್ನು ನನ್ನ ಸಮಕ್ಷಮದಲ್ಲಿ ಬರೆದುಕೊಳ್ಳಲಾಯಿತು. ಅದು ಸತ್ಯವಾಗಿಯೂ ಮತ್ತು ಸರಿಯಾಗಿಯೂ ಇರುತ್ತದೆ ಅಂತಾ ಪ್ರಮಾಣೀಕರಿಸುತ್ತೇನೆ*)*

**ಸಹಿ/-**

ಮೂಡಿಗೆರೆ
ದಿನಾಂಕಃ 10.06.2025

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
**ಜೆ.ಎಂ.ಎಫ್.ಸಿ, ಮೂಡಿಗೆರೆ.**